# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## *ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಹಚ್ಚಿನ್ಸ್ ರಸ್ತೆಯಲ್ಲಿರುವ ಉದ್ಯಾನವನದಲ್ಲಿ ದಿನಾಂಕ: 20-02-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು*

ಹಾಜರಿದ್ದ ಸದಸ್ಯರು,

1. ಶ್ರೀ ನಾರಾಯಣಸ್ವಾಮಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ ಶ್ರೀಕಾಂತ್, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಶ್ರೀಮತಿ ರೋಜಿತಾ, ರಿವೋಬ್ ಅಸೋಸಿಯೇಷನ್ (ರಿ), ಮಾರುತಿಸೇವಾನಗರ
4. ಶ್ರೀ ಎನ್ ರಮೇಶ್, ರಿವೋಬ್ ಅಸೋಸಿಯೇಷನ್ (ರಿ), ಮಾರುತಿಸೇವಾನಗರ
5. ಶ್ರೀ ಎ.ಆರ್ ಸುರೇಶ್, ರಿವೋಬ್ ಅಸೋಸಿಯೇಷನ್ (ರಿ), ಮಾರುತಿಸೇವಾನಗರ

ಹಾಜರಿದ್ದ ಅಧಿಕಾರಿಗಳು

1. ಶ್ರೀ ಎ ಮಣಿಶಂಕರ್, ಹಿರಿಯ ಆರೋಗ್ಯ ನಿರೀಕ್ಷಕರು,
2. ಶ್ರೀ ಜಿ.ವಿ ನಾಗರಾಜ್, ಅಸೆಸ್ಸರ್, ಮಾರುತಿಸೇವಾನಗರ,
3. ಶ್ರೀ ನವೀನ್‌ಕುಮಾರ್, ಸಹಾಯಕ ಅಭಿಯಂತರರು, (ಎಲೆಕ್ಟ್ರಿಕಲ್)
4. ಶ್ರೀ ಕಿಶೋರ್ ಇ.ಎಸ್, ಕಿರಿಯ ಆರೋಗ್ಯ ನಿರೀಕ್ಷಕರು,
5. ಶ್ರೀ ಯೋಗೀಶ್ ಎಂ.ಎಸ್, ಮಾರ್ಷಲ್, ಮಾರುತಿಸೇವಾನಗರ

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು, ಮಾಜಿ ಪಾಲಿಕೆ ಸದಸ್ಯರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

| ಕ್ರಸಂ | ಚರ್ಚಿಸಿದ ವಿಷಯಗಳು | ಸಂಬಂಧಪಟ್ಟ ಇಲಾಖೆ |
|---|---|---|
| 1 | ವಾರ್ಡ್ ವ್ಯಾಪ್ತಿಯಲ್ಲಿ ಮನೆ ಮನೆಗಳಿಂದ ಕಸವನ್ನು ಸಮರ್ಪಕವಾಗಿ ಸಂಗ್ರಹಣೆ ಮಾಡದೇ ಇರುವುದರಿಂದ ಇರುವುದರಿಂದ ಕಸವನ್ನು ಎಲ್ಲಂದರಲ್ಲಿ ಎಸೆಯುತ್ತಿರುವುದು ಕಂಡುಬಂದಿರುತ್ತದೆ ಹಾಗೂ ಪ್ರತಿ ವಾರದಲ್ಲಿ ಬುಧವಾರ ಹಾಗೂ ಶನಿವಾರ ಒಣಕಸವನ್ನು ಮನೆ ಮನೆಗಳಿಂದ ಸಂಗ್ರಹಣೆ ಮಾಡುತ್ತಿದ್ದು, ಇದರ ಬಗ್ಗೆ ಸಾರ್ವಜನಿಕರಿಗೆ ಜನಜಾಗೃತಿ ನೀಡಲು ಸಭೆಯಲ್ಲಿ ಪ್ರಸ್ತಾಪಿಸಿದರು. ಅಲ್ಲದೆ ಸಾರ್ವಜನಿಕರು ಕಸವನ್ನು ಎಲ್ಲಂದರಲ್ಲಿ ಎಸೆದು ಹೋಗುವುದು ಕಂಡು ಬಂದಲ್ಲಿ ಅಂತಹವರಿಗೆ ಮಾರ್ಷಲ್‌ಗಳು ಅಂತಹ ಸಾರ್ವಜನಿಕರ ವಿರುದ್ಧ ಕ್ರಮ ಕೈಗೊಳ್ಳಲು ಹಾಗೂ ದಂಡ ವಿಧಿಸಲು ಕ್ರಮ ವಹಿಸಲು ಆರೋಗ್ಯ ನಿರೀಕ್ಷರಿಗೆ ಸಭೆಯಲ್ಲಿ ಸೂಚಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ರವರು ಈ ಬಗ್ಗೆ ಸೂಕ್ತ ಕ್ರಮ ವಹಿಸಲು . ಕೋರಲಾಗಿರುತ್ತದೆ. |
| 2 | ವಾರ್ಡ್ ವ್ಯಾಪ್ತಿಯ ಕೆಲವು ಪ್ರದೇಶಗಳಲ್ಲಿ ರಾತ್ರಿ ಹಾಗೂ ಮುಂಜಾನೆ ಸಮಯದಲ್ಲಿ ಓಡಾಡುವ ಸಾರ್ವಜನಿಕರಿಗೆ ತೊಂದರೆ ಉಂಟು ಮಾಡುತ್ತಿರುವುದು ಹಾಗೂ ಕಳ್ಳತನ ಪ್ರಕರಣಗಳು ಹೆಚ್ಚಾಗುತ್ತಿದ್ದು ಅಂತಹ ಪ್ರದೇಶಗಳನ್ನು ಗುರುತಿಸಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಿ, ಅಂತಹೆ ಪ್ರಕರಣಗಳಿಗೆ | ಈ ಬಗ್ಗೆ ವಾರ್ಡ್ ವ್ಯಾಪ್ತಿಯಲ್ಲಿ ಅವಶ್ಯವಿರುವ ಪ್ರದೇಶಗಳಲ್ಲಿ ಸಿಸಿ ಟಿವಿಕ್ಯಾಮೆರಾಗಳನ್ನು ಅಳವಡಿಸಲು ಅನುದಾನವನ್ನು ನೀಡಲು ಮೇಲಾಧಿಕಾರಿಗಳಿಗೆ ಕಡತವನ್ನು |

| | | |
|---|---|---|
| | ಕಡಿವಾಣ ಹಾಕಲು ಈ ಸ್ಥಳಗಳಲ್ಲಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸುವ ಕಾಮಗಾರಿಗೆ ರೂ.100.00 ಲಕ್ಷಗಳ ಅನುದಾನವನ್ನು ಪಡೆದು, ಸಾರ್ವಜನಿಕರ ಹಿತದೃಷ್ಟಿಯಿಂದ ಅತೀ ಶೀಘ್ರವಾಗಿ ಸಿಸಿ ಕ್ಯಾಮೆರಾ ಅಳವಡಿಸಲು ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದರು. | ಸಲ್ಲಿಸಲಾಗುವುದು. |
| 3 | ವಾರ್ಡ್ ವ್ಯಾಪ್ತಿಯಲ್ಲಿ ಅನೇಕ ರಸ್ತೆಗಳಲ್ಲಿ ಪಾರ್ಕಿಂಗ್ ಪ್ರದೇಶಗಳಲ್ಲಿ ತಳ್ಳುವ ಗಾಡಿಗಳಲ್ಲಿ ವ್ಯಾಪಾರ ಮಾಡುತ್ತಿರುವುದರಿಂದ ರಸ್ತೆಯಲ್ಲಿ ಸಂಚರಿಸುವ ವಾಹನಗಳಿಗೆ ತೊಂದರೆಯಾಗುತ್ತಿದ್ದು, ಇದರಿಂದ ಟ್ರಾಫಿಕ್ ಜಾಮ್ ಆಗುತ್ತಿರುವುದನ್ನು ತಪ್ಪಿಸಲು ರಸ್ತೆ ಬದಿಯಲ್ಲಿ ತಳ್ಳುವ ಗಾಡಿಗಳಲ್ಲಿ ವ್ಯಾಪಾರ ಮಾಡುವವರನ್ನು ಆ ಸ್ಥಳದಿಂದ ಗಾಡಿಗಳನ್ನು ತೆರವುಗೊಳಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. | ಈ ಬಗ್ಗೆ ಬಾಣಸವಾಡಿ ಪೊಲೀಸ್ ಠಾಣೆ (ಸಂಚಾರಿ) ರವರ ಗಮನಕ್ಕೆ ತಂದು ಸಂಚಾರ ದಟ್ಟಣೆ ಹೆಚ್ಚಾಗುತ್ತಿರುವ ಪ್ರದೇಶಗಳಲ್ಲಿ ಸೂಕ್ತ ಕ್ರಮ ವಹಿಸಲು ತಿಳಿಸಲಾಗಿರುತ್ತದೆ. |
| 4 | ವಾರ್ಡ್ ವ್ಯಾಪ್ತಿಯ ಮುಖ್ಯರಸ್ತೆಗಳ ಎರಡೂ ಕಡೆಗಳಲ್ಲಿ ಇತ್ತೀಚೆಗೆ ವಾಹನಗಳನ್ನು ನಿಲುಗಡೆ ಮಾಡುತ್ತಿರುವುದರಿಂದ ವಾಹನ ಸವಾರರಿಗೆ ಇದರಿಂದ ಕಿರಿಕಿರಿ ಉಂಟಾಗುತ್ತಿದ್ದು, ಮುಂದಿನ ದಿನಗಳಲ್ಲಿ ಸಮ-ಬೆಸ ಸಂಖ್ಯೆಗಳಲ್ಲಿ ಒಂದು ಬದಿಯಲ್ಲಿ ಒಂದೊಂದು ದಿನದಂತೆ ವಾಹನ ನಿಲುಗಡೆ ಮಾಡಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. | ಈ ಬಗ್ಗೆ ಬಾಣಸವಾಡಿ ಪೊಲೀಸ್ ಠಾಣೆ (ಸಂಚಾರಿ) ರವರ ಗಮನಕ್ಕೆ ತಂದು ಸಂಚಾರ ದಟ್ಟಣೆ ಹೆಚ್ಚಾಗುತ್ತಿರುವ ಪ್ರದೇಶಗಳಲ್ಲಿ ಸೂಕ್ತ ಕ್ರಮ ವಹಿಸಲು ತಿಳಿಸಲಾಗಿರುತ್ತದೆ. |
| 5 | ವಾರ್ಡ್ ವ್ಯಾಪ್ತಿಯ ನಾರ್ಥ್ ರಸ್ತೆ ಮತ್ತು ಹಚ್ಚಿನ್ಸ್ ರಸ್ತೆಗಳಲ್ಲಿ ವಾಹನಗಳನ್ನು ನಿಲುಗಡೆ ಮಾಡುವುದನ್ನು ತಡೆಗಟ್ಟಲು ಅಂತಹ ನಾರ್ಥ್ ರಸ್ತೆ ಮತ್ತು ಹಚ್ಚಿನ್ಸ್ ರಸ್ತಗಳಲ್ಲಿ "No Parking" ಬೋರ್ಡ್ ಅಳವಡಿಸಲು ಹಾಗೂ ಈ ಪ್ರದೇಶದಲ್ಲಿ ವಾಹನಗಳನ್ನು ನಿಲುಗಡೆಯನ್ನು ತಡೆಗಟ್ಟಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. | ಈ ಬಗ್ಗೆ ಬಾಣಸವಾಡಿ ಪೊಲೀಸ್ ಠಾಣೆ (ಸಂಚಾರಿ) ರವರ ಗಮನಕ್ಕೆ ತಂದು ಸಂಚಾರ ದಟ್ಟಣೆ ಹೆಚ್ಚಾಗುತ್ತಿರುವ ಪ್ರದೇಶಗಳಲ್ಲಿ ಸೂಕ್ತ ಕ್ರಮ ವಹಿಸಲು ತಿಳಿಸಲಾಗಿರುತ್ತದೆ. |
| 6 | ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರು ತಮ್ಮ ತಮ್ಮ ವಾಹನಗಳನ್ನು ತಮ್ಮ ಮನೆಯ ಅಥವಾ ಅಪಾರ್ಟ್‌ಮೆಂಟ್‌ಗಳ ಮುಂದೆ ರಾತ್ರಿ ಸಮಯದಲ್ಲಿ ನಿಲುಗಡೆ ಮಾಡುವುದನ್ನು ತಪ್ಪಿಸಲು ಹಾಗೂ ಅಂತಹ ವಾಹನಗಳ ಮಾಲೀಕರಿಗೆ ಪಾಲಿಕೆ ವತಿಯಿಂದ ಶುಲ್ಕವನ್ನು ವಸೂಲಾತಿ ಮಾಡಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. | ಈ ಬಗ್ಗೆ ಮೇಲಾಧಿಕಾರಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಿ, ಮೇಲಾಧಿಕಾರಿಯವರ ನಿರ್ದೇಶನದಂತೆ ಕ್ರಮ ವಹಿಸಲಾಗುವುದು. |
| 7 | ವಾರ್ಡ್ ವ್ಯಾಪ್ತಿಯಲ್ಲಿರುವ ವಿಲೇಜ್ ಸೂಪರ್ ಮಾರ್ಕೆಟ್ ರಸ್ತೆಯು ತುಂಬಾ ಕಿರಿದಾಗಿದ್ದು, ಈ ರಸ್ತೆಯಲ್ಲಿ ಸಾರ್ವಜನಿಕರು ರಸ್ತೆಗಳನ್ನು ವಾಹನಗಳನ್ನು ನಿಲುಗಡೆ ಮಾಡುತ್ತಿರುವುದರಿಂದ ಈ ರಸ್ತೆಯಲ್ಲಿ ಸಂಚರಿಸುವ ವಾಹನ ಸವಾರರಿಗೆ ತುಂಬಾ ತೊಂದರೆಯಾಗುತ್ತಿದ್ದು, ಈ ರಸ್ತಗಳಲ್ಲಿ "No Parking" ಬೋರ್ಡ್ ಅಳವಡಿಸಲು ಸಭೆಗೆ ತಿಳಿಸಿದರು. | ಸದರಿ ಪ್ರದೇಶದಲ್ಲಿ "No Parking" ಬೋರ್ಡ್ ಅಳವಡಿಸಲು ಬಾಣಸವಾಡಿ ಪೊಲೀಸ್ ಠಾಣೆ (ಸಂಚಾರಿ) ರವರಿಗೆ ತಿಳಿಸಲಾಗುವುದು. |
| 8 | ವಾರ್ಡ್ ವ್ಯಾಪ್ತಿಯ ನಾಗಯ್ಯಪಾಳ್ಯ, ಎ.ಕೆ.ಕಾಲೋನಿ, ಲಾಜರ್ ರಸ್ತೆ, ಹಚ್ಚಿನ್ಸ್‌ರಸ್ತೆ, ಜೀವನಹಳ್ಳಿ, ಪಾರ್ಕ್ ರಸ್ತೆ, ಐಟಿಸಿ ಕಾಲೋನಿ, ಮಯೂರ ರಸ್ತೆ, ಮುದ್ದಪ್ಪ ರಸ್ತೆ, ಓಲ್ಡ್ ಬೈಯಪ್ಪನಹಳ್ಳಿ ಸುತ್ತಮುತ್ತಲಿನ ಪ್ರದೇಶಗಳ ಸಮಗ್ರ ಅಭಿವೃದ್ಧಿ | ಈ ಬಗ್ಗೆ ವಾರ್ಡ್ ವ್ಯಾಪ್ತಿಯಲ್ಲಿ ಅವಶ್ಯವಿರುವ ಪ್ರದೇಶಗಳ ಸಮಗ್ರ ಅಭಿವೃದ್ಧಿ ಕಾಮಗಾರಿಗಳಿಗೆ ಅವಶ್ಯವಿರುವ ಅನುದಾನವನ್ನು ನೀಡಲು |

| | | |
|---|---|---|
| | ಕಾಮಗಾರಿಗಳಿಗೆ ಅವಶ್ಯವಿರುವ ಸುಮಾರು ರೂ.1000.00 ಲಕ್ಷಗಳ ಅನುದಾನವನ್ನು ಪಡೆದು ಅವಶ್ಯವಿರುವ ಕಾಮಗಾರಿಗಳನ್ನು ಕೈಗೊಳ್ಳಲು ಸಭೆಗೆ ತಿಳಿಸಿದರು. | ಮೇಲಾಧಿಕಾರಿಗಳಿಗೆ ಕಡತವನ್ನು ಸಲ್ಲಿಸಲಾಗುವುದು. |
| ೯ | ವಾರ್ಡ್ ವ್ಯಾಪ್ತಿಯಲ್ಲಿ ಮನೆ ಮನೆಗಳಿಂದ ಕಸ ಸಂಗ್ರಹಣೆ ಹಾಗೂ ವಿಲೇವಾರಿಗೆ ಸಂಬಂಧಿಸಿದ ಸಾರ್ವಜನಿಕ ಕುಂದುಕೊರತೆಗಳನ್ನು ಬಗೆಹರಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ-ಸರ್ವಜ್ಞನಗರ ವಿಭಾಗ ರವರು ಮುಂದಿನ ವಾರ್ಡ್ ಕಮಿಟಿ ಸಭೆಗೆ ಕಡ್ಡಾಯವಾಗಿ ಹಾಜರಾಗಲು ಕ್ರಮ ವಹಿಸಲು ಸಭೆಗೆ ಮಾನ್ಯ ಅಧ್ಯಕ್ಷರು ತಿಳಿಸಿದರು. | ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ-ಸರ್ವಜ್ಞನಗರ ವಿಭಾಗ ರವರಿಗೆ ಮುಂದಿನ ಸಭೆಗೆ ಹಾಜರಿರಲು ದೂರವಾಣಿ ಮುಖೇಣ ತಿಳಿಸಲಾಗಿರುತ್ತದೆ. |

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

20/12/2021

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಪ್ರತಿಯನ್ನು

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ/ಕಛೇರಿ ಕಡತಕ್ಕೆ.